ಮಾಧ್ಯಮ ಮಾಹಿತಿ:

ಮಾನ್ಯ ಆಡಳಿತಗಾರರು ಹಾಗೂ ಮಾನ್ಯ ಆಯುಕ್ತರು ರವರಿಂದ ಜಾಗೃತಿ ಅಭಿಯಾನ "ಫಿಟ್ ಇಂಡಿಯಾ ಸೈಕ್ಲಥಾನ್"ಗೆ ಚಾಲನೆ :

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಹಯೋಗದೊಂದಿಗೆ ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವತಿಯಿಂದ ನಾಳೆ ಬೆಳಗ್ಗೆ 7.00ಕ್ಕೆ ಕಬ್ಬನ್ ಪಾರ್ಕ್(ಹಡ್ಸನ್ ವೃತ್ತ)ದಿಂದ ಹಮ್ಮಿಕೊಂಡಿರುವ ಜಾಗೃತಿ ಅಭಿಯಾನ " ಫಿಟ್ ಇಂಡಿಯಾ ಸೈಕ್ಲಥಾನ್"ಗೆ ಮಾನ್ಯ ಆಡಳಿತಗಾರರು ಹಾಗೂ ಮಾನ್ಯ ಆಯುಕ್ತರು ರವರು ಚಾಲನೆ ನೀಡಲಿದ್ದಾರೆ. ಈ ವೇಳೆ ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕರು ಶ್ರೀ ರಾಜೇಂದ್ರ ಚೋಳನ್, ಪೂರ್ವ ವಲಯ ಜಂಟಿ ಆಯುಕ್ತರು ಶ್ರೀಮತಿ ಪಲ್ಲವಿ, ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ಹಾಗೂ ಇನ್ನಿತರೆ ಸಂಚಾರ ವಿಭಾಗದ ಡಿಸಿಪಿ ಶ್ರೀ ನಾರಾಯಣ್ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ಫಿಟ್ ಇಂಡಿಯಾ ಅಭಿಯಾನದ ಅಂಗವಾಗಿ ಇಂದು ಪಾಲಿಕೆ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲಥಾನ್ ಹಮ್ಮಿಕೊಳ್ಳಲಾಗಿದೆ. ಇದೇ ಸಂದರ್ಭದಲ್ಲಿ ನಗರದಲ್ಲಿ ಕೋವಿಡ್ ವಾರಿಯರ್ಸ್ ಗಳಾಗಿ ಹಗಲಿರುಳು ಶ್ರಮಿಸಿದವರಿಗೆ ಗೌರವ ಸಲ್ಲಿಸುತ್ತಿರುವುದು ಅಭಿನಂದನೀಯ ಎಂದು ಆಡಳಿತಗಾರರು ತಿಳಿಸಿದರು.

ಆಯುಕ್ತರು ರವರು ಮಾತನಾಡಿ , ಪ್ರಧಾನಮಂತ್ರಿಗಳ ಕನಸಾಗಿರುವ ಪಿಟ್ ಇಂಡಿಯಾನ ಅಭಿಯಾನದ ಅಂಗವಾಗಿ ಇಂದು ಪಾಲಿಕೆ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲಥಾನ್ ಆಯೋಜನೆ ಮಾಡಲಾಗಿದೆ. ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ ಪ್ರತಿನಿತ್ಯ ದೈಹಿಕ ಶಿಕ್ಷಣ ಬಹಳ ಮುಖ್ಯವಾಗಿರುತ್ತದೆ. ಆದ್ದರಿಂದ ಎಲ್ಲರೂ ಫಿಟ್ ಆಗಿರುವ ಮೂಲಕ ಆರೋಗ್ಯಕರವಾಗಿರಬೇಕು ಎಂದರು.

ಅಲ್ಲದೆ ನಗರದಲ್ಲಿ ಕೋವಿಡ್-19 ತಡೆಯಲು ಹಗಲಿರುಳು ಶ್ರಮಿಸಿದ ಸಾಕಷ್ಟು ಕೋವಿಡ್ ವಾರಿಯರ್ಸ್ ಗಳು ನಗರದಲ್ಲಿದ್ದಾರೆ. ಅವರಲ್ಲಿ ಕೆಲವರನ್ನು ಗುರುತಿಸಿ ಇಂದು ಸನ್ಮಾನಿಸುತ್ತಿರುವುದು ಅಭಿನಂದನೀಯ ಎಂದರು.

ಪಿಟ್ ಇಂಡಿಯಾ ಅಂಗವಾಗಿ ಪಾಲಿಕೆ ವ್ಯಾಪ್ತಿಯಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿಯು ಕೋವಿಡ್-19 ವಾರಿಯರ್ಸ್ ಗಳಾಗಿ ಕಾರ್ಯನಿರ್ವಹಿಸುವ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು ಹಾಗೂ ಮಾರ್ಷಲ್ ಗಳನ್ನು ಗುರುತಿಸಿ 2,000 ರೂ. ಪ್ರೋತ್ಸಾಹ ಗೌರವ ಮೊತ್ತ, ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಸೈಕ್ಲಥಾನ್ ಸಾಗಿದ ಮಾರ್ಗ: ಹಡ್ಸನ್ ವೃತ್ತ - ಚಿನ್ನಸ್ವಾಮಿ ಕ್ರೀಡಾಂಗಣದ ಕಸ್ತೂರಬಾ ರಸ್ತೆ(ಕ್ವೀನ್ಸ್ ರಸ್ತೆ) ಮೂಲಕ - ಜಿ.ಪಿ.ಒ ವೃತ್ತ - ರಾಜಭವನ ರಸ್ತೆ - ಚಾಲುಕ್ಯ ವೃತ್ತ - ಡಾ. ಬಿ.ಆರ್.ಅಂಬೇಡ್ಕರ್ ವೀಧಿ(ಎಂ.ಎಸ್.ಕಟ್ಟಡ ಮಾರ್ಗವಾಗಿ) - ಕೆ.ಆರ್.ವೃತ್ತ - ನೃಪತುಂಗ ರಸ್ತೆ ಮಾರ್ಗವಾಗಿ ಹಡ್ಸನ್ ವೃತ್ತಕ್ಕೆ ಸೈಕ್ಲಥಾನ್ ಪೂರ್ಣಗೊಂಡಿತು.